ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ವಿಧಾನ ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡ ಪ್ರಭ  ದಿನಾಂಕ : DATE 07/07/2019

# ಸ್ಪೀಕರ್ ಅಂಗೀಕರಿಸ್ತಾರಾ? ವಿಳಂಬ ಮಾಡುತ್ತಾರಾ?

## ರಮೇಶ್ ಕುಮಾರ್ ನಡೆ ಕುರಿತು ಭಾರೀ ಕುತೂಹಲ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 7/7/19

ಹನ್ನೆರಡು ಮಂದಿ ಅತೃಪ್ತ ಶಾಸಕರು ನೀಡಿರುವ ರಾಜೀನಾಮೆ ಅಂಗೀಕಾರ ವಿಚಾರದಲ್ಲಿ ವಿಧಾನಸಭೆ ಸ್ಪೀಕರ್ ತೆಗೆದುಕೊಳ್ಳುವ ತೀರ್ಮಾನದ ಮೇಲೆ ದೋಸ್ತಿ ಸರ್ಕಾರದ ಭವಿಷ್ಯ ನಿಂತಿದೆ. ಸರ್ಕಾರ ಉಳಿಸಲು ಅನುಕೂಲವಾಗುವಂತೆ ಈ ಶಾಸಕರ ರಾಜೀನಾಮೆ ಅಂಗೀಕಾರ ಪ್ರಕ್ರಿಯೆಯನ್ನು ವಿಳಂಬ ಮಾಡುವರೇ ಅಥವಾ ತಮ್ಮ ನಿಯಮಾವಳಿಗೆ ಕಟ್ಟುಬಿದ್ದು ಶೀಘ್ರ ನಿರ್ಧಾರ ಕೈಗೊಳ್ಳುವರೇ ಎಂಬುದು ಕುತೂಹಲ ಮೂಡಿಸಿದೆ.

ಶನಿವಾರ ಕಾಂಗ್ರೆಸ್ ಹಾಗೂ ಜೆಡಿಎಸ್‌ನ ಹನ್ನೆರಡು ಮಂದಿ ಅತೃಪ್ತ ಶಾಸಕರು ರಾಜೀನಾಮೆ ನೀಡಿದ್ದು, ಇಲ್ಲಿಯವರೆಗೆ ರಾಜೀನಾಮೆ ನೀಡಿದವರ ಒಟ್ಟು ಸಂಖ್ಯೆ 13ಕ್ಕೆ ಏರಿದೆ. ಇವರ ರಾಜೀನಾಮೆ ಅಂಗೀಕರಿಸುವ ಅಥವಾ ವಿಳಂಬ ಮಾಡುವ ತೀರ್ಮಾನ ವಿಧಾನಸಭಾ ಅಧ್ಯಕ್ಷರಿಗಿದೆ.

↘ 15

### ಮಂಗಳವಾರ ನೋಡ್ತೀನಿ



ಹನ್ನೊಂದು ಶಾಸಕರು ತಮ್ಮನ್ನು ಭೇಟಿಯಾಗಿ ರಾಜೀನಾಮೆ ಪತ್ರ ನೀಡಿದ್ದಾರೆ ಎಂದು ನನ್ನ ಆಪ್ತ ಕಾರ್ಯದರ್ಶಿ ಮಾಹಿತಿ ನೀಡಿದ್ದಾರೆ. ಭಾನುವಾರ ರಜಾ ದಿನ ಹಾಗೂ ಸೋಮವಾರ ನನಗೆ ವೈಯಕ್ತಿಕ ಕೆಲಸ ಇರುವುದರಿಂದ ಮಂಗಳವಾರ ಪರಿಶೀಲನೆ ನಡೆಸುತ್ತೇನೆ.

• **ರಮೇಶ್ ಕುಮಾರ್** ಸ್ಪೀಕರ್

# ಅಂಗೀಕಾರವ್ರೋ? ವಿಳಂಬವ್ರೋ?

ಕ.ಪ್ರ 7/7/19

↙ ಮೊದಲ ಪುಟದಿಂದ



ಅತೃಪ್ತ ಶಾಸಕರ ರಾಜೀನಾಮೆಯನ್ನು ತಕ್ಷಣ ಅಂಗೀಕರಿಸಿದರೆ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಸರ್ಕಾರ ಅಲ್ಪಮತಕ್ಕೆ ಕುಸಿದು ಸರ್ಕಾರ ಪತನವಾಗುವ ಸಾಧ್ಯತೆಗಳಿವೆ. ಆದರೆ, ಈ ಪ್ರಕ್ರಿಯೆಯನ್ನು ನಿಧಾನಗೊಳಿಸುವ ಅವಕಾಶವೂ ಅವರ ಮುಂದಿದೆ. ಪ್ರಸ್ತುತ ರಾಜೀನಾಮೆ ನೀಡಿರುವವರ ಪೈಕಿ ಇಬ್ಬರು ಶಾಸಕರ (ರಮೇಶ್ ಜಾರಕಿಹೊಳಿ ಹಾಗೂ ಮಹೇಶ್ ಕುಮಟಳ್ಳಿ) ವಿರುದ್ಧ ಪಕ್ಷಾಂತರ ನಿಷೇಧ ಕಾಯಿದೆ ಅಡಿ ಕ್ರಮ ಕೈಗೊಳ್ಳುವಂತೆ ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕ ಸಿದ್ದರಾಮಯ್ಯ ಫೆಬ್ರವರಿಯಲ್ಲಿ ದೂರು ನೀಡಿದ್ದರು. ಈವರೆಗೂ ದೂರಿನ ಬಗ್ಗೆ ಸೂಕ್ತ ಕ್ರಮ ಕೈಗೊಂಡಿಲ್ಲ. ಬಿ. ನಾಗೇಂದ್ರ, ಮಹೇಶ್ ಕುಮಟಳ್ಳಿ, ರಮೇಶ್ ಜಾರಕಿಹೊಳಿ, ಉಮೇಶ್ ಜಾಧವ್ ವಿರುದ್ಧ 82 ಪುಟಗಳ ದೂರು ನೀಡಲಾಗಿತ್ತು. ಈ ಪೈಕಿ ಉಮೇಶ್ ಜಾಧವ್ ಸಂಸದರಾಗಿ ಆಯ್ಕೆಯಾಗಿದ್ದು, ಬಿ. ನಾಗೇಂದ್ರ ಕಾಂಗ್ರೆಸ್ ವಲಯದಲ್ಲೇ ಉಳಿದುಕೊಂಡಿದ್ದಾರೆ.

ಉಳಿದಂತೆ ರಮೇಶ್ ಜಾರಕಿಹೊಳಿ ಹಾಗೂ ಮಹೇಶ್ ಕುಮಟಳ್ಳಿಗೆ ಪಕ್ಷಾಂತರ ನಿಷೇಧ ಕಾಯಿದೆ ಬಗ್ಗೆ ಸ್ಪೀಕರ್ ತೆಗೆದುಕೊಳ್ಳುವ ಕ್ರಮದ ಬಗ್ಗೆ ಆತಂಕ ಇದೆ. ಸ್ಪೀಕರ್ ಅವರು ಈ ಪ್ರಕ್ರಿಯೆಯನ್ನು ಆರಂಭಗೊಳಿಸುವ ಮೂಲಕ ಶಾಸಕರ ರಾಜೀನಾಮೆ ಪ್ರಕ್ರಿಯೆಯನ್ನು ವಿಳಂಬ ಮಾಡಬಹುದು. ಇದಲ್ಲದೆ, ಉಮೇಶ್ ಜಾಧವ್ ಪ್ರಕರಣದಲ್ಲಿ ನಡೆದುಕೊಂಡಂತೆ ಶಾಸಕರನ್ನು ಒಬ್ಬೊಬ್ಬರಾಗಿ ಕರೆಸಿ ರಾಜೀನಾಮೆ ನೀಡಲು ನಿಜ ಕಾರಣದ ಬಗ್ಗೆ ಸ್ಪಷ್ಟನೆ ಪಡೆಯಬಹುದು. ಯಾವುದೇ ಆಸೆ ಆಮಿಷಕ್ಕೆ ಒಳಗಾಗಿಲ್ಲ ಎಂಬುದನ್ನು ಖಾತರಿ ಪಡಿಸಿಕೊಳ್ಳುವ ನೆಪ ನೀಡಬಹುದು. ಅಲ್ಲದೆ, ಶಾಸಕರ ಕ್ಷೇತ್ರಗಳಿಂದ ಸಂಘಟನೆಗಳು ಹಾಗೂ ಸಾರ್ವಜನಿಕರನ್ನು ಆಹ್ವಾನಿಸಿ ಅವರ ಅಭಿಪ್ರಾಯ ಸಂಗ್ರಹ ನಡೆಸುವ ನೆಪ ನೀಡಿ ಈ ಪ್ರಕ್ರಿಯೆಯನ್ನು ಸಾಧ್ಯವಾದಷ್ಟು ವಿಳಂಬ ಮಾಡಬಹುದು. ಹೀಗೆ ವಿಳಂಬ ಮಾಡುವ ಮೂಲಕ ಅತೃಪ್ತ ಶಾಸಕರ ಮನವೊಲಿಸಲು ಮೈತ್ರಿಕೂಟದ ನಾಯಕರಿಗೆ ಸಮಯವನ್ನು ಒದಗಿಸಿಕೊಡಬಹುದು. ಆದರೆ, ವಿಳಂಬ ಧೋರಣೆ ಅನುಸರಿಸಿದರೂ ರಾಜೀನಾಮೆಯು ನಿಯಮಬದ್ಧವಾಗಿದ್ದರೆ ಅಂಗೀಕರಿಸಬೇಕಾಗುತ್ತದೆ.

ಈ ರೀತಿ ವಿಳಂಬ ಧೋರಣೆಯಿಂದ ವಿನಾಕಾರಣ ಗೊಂದಲ ಉಂಟುಮಾಡುವುದು ಏಕೆ ಎಂಬ ನಿರ್ಧಾರಕ್ಕೆ ಸ್ಪೀಕರ್ ಬಂದರೆ ಶೀಘ್ರವೇ ರಾಜೀನಾಮೆ ಪತ್ರ ಅಂಗೀಕರಿಸಬಹುದು.